ಫ್ರೀಡಂ ನ್ಯೂಸ್

# ಹೆಣ್ಣುಬಾಕ ಸಾಹಿತಿಗೆ ಜ್ಞಾನಪೀಠ

## ವೈರಮುತ್ತುಗೆ ಪ್ರಶಸ್ತಿ ಕೊಟ್ಟಿದ್ದೇ ಕಳಂಕ ಎಂದ ಸಾಹಿತ್ಯಾಸಕ್ತರು

ಜ್ಞಾನಪೀಠ ಪ್ರಶಸ್ತಿ ಎನ್ನುವುದು ಭಾರತೀಯ ಸಾಹಿತ್ಯ ಕ್ಷೇತ್ರದಲ್ಲಿ ನೀಡುವ ಪ್ರತಿಷ್ಠಿತ ಪ್ರಶಸ್ತಿಗಳಲ್ಲಿ ಒಂದು. ಅಲ್ಲದೇ ಇದು ಭಾರತದ ಅತ್ಯಂತ ಹಳೆಯ ಸಾಹಿತ್ಯ ಪ್ರಶಸ್ತಿಗಳಲ್ಲೂ ಒಂದಾಗಿದೆ. ಸುಮಾರು 24 ವರ್ಷಗಳ ಬಳಿಕ ತಮಿಳು ಸಾಹಿತ್ಯಕ್ಕೆ ಭಾರತದ ಅತ್ಯುನ್ನತ ಸಾಹಿತ್ಯ ಗೌರವ ದೊರೆತಿದೆ. ಆದ್ರೆ ತಮಿಳು ಸಾಹಿತಿ ಹಾಗೂ ಗೀತಾರಚನೆಕಾರ ವೈರಮುತ್ತು ಅವರಿಗೆ 'ಜ್ಞಾನಪೀಠ ಪ್ರಶಸ್ತಿ' ಘೋಷಿಸಿರೋದು ತಮಿಳುನಾಡು ಸೇರಿದಂತೆ ದಕ್ಷಿಣ ಭಾರತದಾದ್ಯಂತ ವ್ಯಾಪಕ ವಿರೋಧ, ಆಕ್ರೋಶ ವ್ಯಕ್ತವಾಗಿದೆ.



2018ರಲ್ಲಿ ದೇಶಾದ್ಯಂತ, ಅದರಲ್ಲೂ ಸಿನಿಮಾರಂಗದಲ್ಲಿ ಹೆಚ್ಚು ಸದ್ದು ಮಾಡಿದ್ದ MeToo ಚಳವಳಿಯ ಸಂದರ್ಭದಲ್ಲಿ ವೈರಮುತ್ತು ವಿರುದ್ಧವೂ ಲೈಂಗಿಕ ಕಿರುಕುಳ ಆರೋಪಗಳು ಕೇಳಿಬಂದಿದ್ದವು. ಅನುಚಿತ ಸ್ಪರ್ಶ, ಲೈಂಗಿಕ ಸಹಕಾರಕ್ಕೆ ಒತ್ತಾಯ, ವೃತ್ತಿಪರ ಅವಕಾಶಗಳ ಆಮಿಷವೊಡ್ಡಿ ಕಿರುಕುಳಕ್ಕೆ ಯತ್ನದಂತಹ ಗಂಭೀರ ಆರೋಪಗಳು ವೈರಮುತ್ತು ವಿರುದ್ಧ ಬಹಿರಂಗಗೊಂಡಿದ್ದವು.

ಕವಿಯಾಗಿ ಒಳ್ಳೆಯ ಕವಿ ಇರಬಹುದು, ಆದರೆ ಆತ ಒಳ್ಳೆಯ ಮನುಷ್ಯನಲ್ಲ. ಹೆಣ್ಣುಮಕ್ಕಳ ಬಗ್ಗೆ ಗೌರವವಿಲ್ಲದ, ಮಹಿಳೆಯರ ಜತೆ ಘನತೆಯಿಂದ ನಡೆದುಕೊಳ್ಳದ ಈತ ಒಬ್ಬ ಹೆಣ್ಣುಬಾಕನೆಂಬ ಆರೋಪವಿದೆ. ಈ ತನಕ 18 ಮಹಿಳೆಯರು ವೈರಮುತ್ತು ನೀಡಿದ ಲೈಂಗಿಕ ಕಿರುಕುಳದ ಬಗ್ಗೆ ಸಾರ್ವಜನಿಕವಾಗಿ ಆರೋಪಿಸಿದ್ದಾರೆ. ಮಹಿಳೆಯರಿಗೆ ಮಾನಸಿಕ ಹಿಂಸೆ ನೀಡಿದ ಬಗೆಗಿನ ಆರೋಪಗಳು ವರದಿಯಾಗಿವೆ. ತಮಿಳು ಗಾಯಕಿ ಚಿನ್ಮಯಿ ಶ್ರೀಪಾದ ಅವರಂತೂ ಈತನ ನೀಚ ಕೃತ್ಯ ಬಯಲಿಗೆಳೆದು, ಆತನಿಗೆ ಶಿಕ್ಷೆ ಆಗಬೇಕೆಂದು ನಿರಂತರವಾಗಿ ಹೋರಾಡುತ್ತಿದ್ದಾರೆ.

ಗಾಯಕಿ ಚಿನ್ಮಯಿ ಶ್ರೀಪಾದ ಅವರು ಪ್ರತಿಕ್ರಿಯಿಸಿ 'ಚಿಕ್ಕ ಹುಡುಗಿಯರಿಂದ ವಿವಿಧ ವಯೋಮಾನದ ಅನೇಕ ಮಹಿಳೆಯರು ವೈರಮುತ್ತು ವಿರುದ್ಧದ ಲೈಂಗಿಕ ಕಿರುಕುಳದ ಬಗ್ಗೆ ಬಹಿರಂಗವಾಗಿ ಆರೋಪಿಸಿದ್ದಾರೆ. ಇಂತಹ ಆರೋಪ ಹೊತ್ತ ವ್ಯಕ್ತಿಯನ್ನು ಜ್ಞಾನಪೀಠ ದಂತಹ ದೇಶದ ಅತ್ಯುನ್ನತ ಸಾಹಿತ್ಯ ಗೌರವಕ್ಕೆ ಆಯ್ಕೆ ಮಾಡಿರುವುದು ವಿಶಾದಕರ. ಇದು ಜ್ಞಾನಪೀಠಕ್ಕೆ ಕಪ್ಪು ಚುಕ್ಕೆ ಎಂದಿದ್ದಾರೆ.

ಲೇಖಕಿ ಮೀನಾ ಕಂದಸಾಮಿ ಅವರು, ವೈರಮುತ್ತು ಅವರ ಪ್ರಶಸ್ತಿ ಆಯ್ಕೆಯ ಬಗ್ಗೆ ಟೀಕಿಸುತ್ತಾ, 2023ರ ಟ್ವಿಟ್ಟರ್‌ನಲ್ಲಿ ಬರೆದಿದ್ದ ತಮ್ಮ ಪೋಸ್ಟ್ ಅನ್ನು ಮರು ಹಂಚಿಕೊಂಡಿದ್ದಾರೆ. ಅದರಲ್ಲಿ ಅವರು ವೈರಮುತ್ತು ಅವರ ಉನ್ನತ ರಾಜಕಾರಣಿಗಳ ಜತೆಗಿನ ಒಡನಾಟದ ವಿರುದ್ಧ ಮಾತನಾಡಿದ್ದಾರೆ. ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ವೈರಮುತ್ತು ಅವರನ್ನು ಅಭಿನಂದಿಸಿದ ಹಿನ್ನೆಲೆಯಲ್ಲಿ ಬರೆದ ಹಿಂದಿನ ಹೇಳಿಕೆಯಲ್ಲಿ, "ಪೆರಿಯಾರ್ ಇ.ವಿ. ರಾಮಸಾಮಿ ಅವರಿಂದ ನಾನು ಕಲಿತ ಒಂದು ವಿಷಯವೆಂದರೆ, ಎಂದಿಗೂ ಸ್ವಾಭಿಮಾನವನ್ನು ಕಳೆದುಕೊಳ್ಳದಿರುವುದು. ಲೈಂಗಿಕ ಕಿರುಕುಳದ ಗಂಭೀರ ಆರೋಪ ಹೊತ್ತವರೊಂದಿಗೆ ನೀವು ಗುರುತಿಸಿಕೊಳ್ಳುವುದು ನಿಮ್ಮ ಸಾರ್ವಜನಿಕ ಇಮೇಜ್‌ಗೆ ದಕ್ಕೆಯಾಗಿದೆ. ಅದು ನಿಮ್ಮ ಪಕ್ಷದಲ್ಲಿನ ಮಹಿಳೆಯರನ್ನು ಅವಮಾನಿಸಿದಂತಾಗಿದೆ ದಯವಿಟ್ಟು ಇದರ ಬಗ್ಗೆ ಯೋಚಿಸಿ ಎಂದು ಹೇಳಿದ್ದಾರೆ.



Gyanpith Award

ವೈರಮುತ್ತು ಅವರಿಗೆ 2021ರಲ್ಲಿ ಕೇರಳದ ONV ಕುರುಪ್ ಸಾಹಿತ್ಯ ಪ್ರಶಸ್ತಿ ನೀಡಲಾಗಿತ್ತು. ಆದರೆ, #MeToo ಆರೋಪಗಳಿಂದಾಗಿ ಸಾರ್ವಜನಿಕ ಆಕ್ರೋಶ ವ್ಯಕ್ತವಾದ ಬೆನ್ನಲ್ಲೇ, ಅವರು ಪ್ರಶಸ್ತಿಯನ್ನು ಹಿಂದಿರುಗಿಸಿದರು. ಒಟ್ಟಿನಲ್ಲಿ ಈಗ ಜ್ಞಾನಪೀಠ ಪ್ರಶಸ್ತಿ ಘೋಷಣೆಯು 'ಮೀಟೂ' ಆರೋಪಗಳನ್ನು ಮತ್ತೆ ಮುನ್ನೆಲೆಗೆ ತಂದಿದೆ. ಸದ್ಯ, ಕೆಲವೇ ವಾರಗಳಲ್ಲಿ ತಮಿಳುನಾಡು ವಿಧಾನಸಭಾ ಚುನಾವಣೆಯೂ ನಡೆಯಲಿದೆ. ಇಂತಹ ಸಮಯದಲ್ಲಿ 'ಜ್ಞಾನಪೀಠ ಟ್ರಸ್ಟ್' ವೈರಮುತ್ತು ಅವರಿಗೆ ಜ್ಞಾನಪೀಠ ಪ್ರಶಸ್ತಿ ಘೋಷಿಸಿರುವುದು ಬಿಜೆಪಿಯ ಚುನಾವಣಾ ತಂತ್ರದ ಭಾಗವೆಂದೂ ಹೇಳಲಾಗುತ್ತಿದೆ.

# ಭೀಕರ ಅಪಘಾತಕ್ಕೆ ಮೂವರು ಸಬ್ ಇನ್ಸ್ ಪೆಕ್ಟರ್ ಗಳ ಬಲಿ!

**ಚಿತ್ರದುರ್ಗ:** ಜಿಲ್ಲೆಯ ಚಳ್ಳಕೆರೆ ತಾಲೂಕಿನ ಹೆಗ್ಗೆರೆ ಗ್ರಾಮದ ಸಮೀಪ ರಾಷ್ಟ್ರೀಯ ಹೆದ್ದಾರಿಯಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ರಿಸರ್ವ್ ಸಬ್ ಇನ್ಸ್‌ಪೆಕ್ಟರ್‌ಗಳು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಬೆಂಗಳೂರಿನಿಂದ ಬಳ್ಳಾರಿಗೆ ಸ್ನೇಹಿತರೊಬ್ಬರ ಮದುವೆ ಸಮಾರಂಭದಲ್ಲಿ ಪಾಲ್ಗೊಳ್ಳಲು ಒಂದೇ ಕಾರಿನಲ್ಲಿ ಐವರು ಅಧಿಕಾರಿಗಳು ತೆರಳುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ. ಮೃತರನ್ನು ಅಮರೇಶ್, ಮಂಜುನಾಥ್ ಮತ್ತು ಸಚಿನ್ ಎಂದು ಗುರುತಿಸಲಾಗಿದ್ದು, ಇಲಾಖೆಯ ಉದಯೋನ್ಮುಖ ಅಧಿಕಾರಿಗಳನ್ನು ಕಳೆದುಕೊಂಡ ಪೊಲೀಸ್ ಪಡೆ ಶೋಕಸಾಗರದಲ್ಲಿ ಮುಳುಗಿದೆ.

ಘಟನೆಯ ವಿವರಗಳ ಪ್ರಕಾರ, ಇಂದು ಬೆಳಿಗ್ಗೆ ಸುಮಾರು 7 ಗಂಟೆಯ ಹೊತ್ತಿಗೆ ಸಬ್ ಇನ್ಸ್‌ಪೆಕ್ಟರ್‌ಗಳು ಪ್ರಯಾಣಿಸುತ್ತಿದ್ದ ಕಾರು ನಿಯಂತ್ರಣ ತಪ್ಪಿ ಮುಂದೆ ಚಲಿಸುತ್ತಿದ್ದ ಲಾರಿಗೆ ಹಿಂಬದಿಯಿಂದ ಅತೀ ವೇಗವಾಗಿ ಡಿಕ್ಕಿ ಹೊಡೆದಿದೆ. ಅಪಘಾತದ ತೀವ್ರತೆ ಎಷ್ಟಿತ್ತೆಂದರೆ ಕಾರು ಲಾರಿಯ ಅಡಿಯಲ್ಲಿ ಸಿಲುಕಿ ಸುಮಾರು 300 ಮೀಟರ್‌ಗಳಷ್ಟು ದೂರ ಎಳೆದೊಯ್ಯಲ್ಪಟ್ಟಿದೆ. ಇದರಿಂದಾಗಿ ಕಾರಿನ ಮುಂಭಾಗ ಸಂಪೂರ್ಣ ನುಜ್ಜುಗುಜ್ಜಾಗಿದ್ದು, ಮೂವರು ಅಧಿಕಾರಿಗಳು ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ. ಕಾರಿನಲ್ಲಿದ್ದ ಇತರ ಇಬ್ಬರಾದ ಲಕ್ಷ್ಮಣ್ ಮತ್ತು ಈಶ್ವರ್ ಅವರಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆಯ ಆಸ್ಪತ್ರೆಗೆ ದಾಖಲಿಸಲಾಗಿದೆ.



# ಆರು ನವಿಲುಗಳ ಸಂಶಯಾಸ್ಪದ ಸಾವು, ವಿಷ ಹಾಕಿರುವ ಶಂಕೆ!



ನೆಲಮಂಗಲ: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನಲ್ಲಿ ರಾಷ್ಟ್ರಪಕ್ಷಿ ನವಿಲುಗಳ ಮಾರಣಹೋಮ ನಡೆದಿದ್ದು, ಆರು ನವಿಲುಗಳು ಮೃತಪಟ್ಟ ಸ್ಥಿತಿಯಲ್ಲಿ ಪತ್ತೆಯಾಗಿವೆ. ನೆಲಮಂಗಲದ ಬಿಲಾಲ್ ನಗರದ ತೋಟವೊಂದರ ಶೆಡ್ ಸಮೀಪ ಈ ನವಿಲುಗಳ ಕಳೆಬರಗಳು ಒಂದೇ ಕಡೆ ಬಿದ್ದಿರುವುದನ್ನು ಗಮನಿಸಿದ ಸ್ಥಳೀಯರು ತಕ್ಷಣ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಸುಂದರವಾದ ಪಕ್ಷಿಗಳು ಹೀಗೆ ದಾರುಣವಾಗಿ ಸಾವನ್ನಪ್ಪಿರುವುದು ಸ್ಥಳೀಯರಲ್ಲಿ ತೀವ್ರ ಆತಂಕ ಮತ್ತು ಆಕ್ರೋಶವನ್ನು ಮೂಡಿಸಿದೆ.

ಪ್ರಾಥಮಿಕ ಪರಿಶೀಲನೆಯ ವೇಳೆ ಈ ನವಿಲುಗಳಿಗೆ ಯಾರೋ ಕಿಡಿಗೇಡಿಗಳು ಆಹಾರದಲ್ಲಿ ವಿಷವಿಟ್ಟು ಸಾಯಿಸಿರುವ ಸಾಧ್ಯತೆ ಇದೆ ಎಂಬ ಬಲವಾದ ಅನುಮಾನ ವ್ಯಕ್ತವಾಗಿದೆ. ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ನೆಲಮಂಗಲ ಟೌನ್ ಪೊಲೀಸ್ ಠಾಣೆಯ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತ ನವಿಲುಗಳ ದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ವರದಿ ಬಂದ ನಂತರವಷ್ಟೇ ಸಾವಿಗೆ ನಿಖರ ಕಾರಣವೇನು ಎಂಬುದು ಅಧಿಕೃತವಾಗಿ ತಿಳಿದುಬರಲಿದೆ.

ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ನವಿಲುಗಳನ್ನು ಕೊಲ್ಲುವುದು ಗಂಭೀರ ಅಪರಾಧವಾಗಿದ್ದು, ಅಧಿಕಾರಿಗಳು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದಾರೆ. ತೋಟದ ಮಾಲೀಕರು ಅಥವಾ ಸ್ಥಳೀಯ ಕಿಡಿಗೇಡಿಗಳು ಈ ಕೃತ್ಯ ಎಸಗಿದ್ದಾರೆಯೇ ಎಂಬ ಬಗ್ಗೆ ತನಿಖೆ ಚುರುಕುಗೊಂಡಿದೆ. ರಾಷ್ಟ್ರಪಕ್ಷಿಗಳ ಜೀವ ತೆಗೆದ ತಪ್ಪಿತಸ್ಥರನ್ನು ಶೀಘ್ರವೇ ಪತ್ತೆ ಹಚ್ಚಿ ಅವರಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಪರಿಸರ ಪ್ರೇಮಿಗಳು ಒತ್ತಾಯಿಸಿದ್ದಾರೆ.

# ವಿವಾದಕ್ಕೀಡಾದ ಸಾಹಿತಿ ಬಾನು ಮುಷ್ತಾಕ್ ನಡೆ; ಚಪ್ಪಲಿ ಧರಿಸಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ!



**ಮಂಡ್ಯ:** ಸಂವಿಧಾನ ಜಾಗೃತಿ ಸಮಾವೇಶದಲ್ಲಿ ಸಾಹಿತಿ ಬಾನು ಮುಷ್ತಾಕ್ ಅವರು ಚಪ್ಪಲಿ ಧರಿಸಿಯೇ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ಘಟನೆ ಕೇವಲ ವಿವಾದವಾಗಿ ಉಳಿಯದೆ, ವೇದಿಕೆಯ ಮೇಲೆ ಸೈದ್ಧಾಂತಿಕ ಸಂಘರ್ಷಕ್ಕೂ ಕಾರಣವಾಯಿತು. ಸಂಘಟಕರು "ಇದು ಭಾವಚಿತ್ರಕ್ಕೆ ಮಾಡುವ ಅವಮಾನ, ದಯವಿಟ್ಟು ಚಪ್ಪಲಿ ಬಿಡಿ" ಎಂದು ಪದೇ ಪದೇ ವಿನಂತಿಸಿದರೂ, ಬಾನು ಮುಷ್ತಾಕ್ ಅವರು "ನಾನು ಚಪ್ಪಲಿ ಬಿಡುವುದಿಲ್ಲ, ಇದು ನನ್ನ ಸಂಸ್ಕೃತಿ" ಎಂದು ಹಠ ಹಿಡಿದದ್ದು ಸಭೆಯಲ್ಲಿದ್ದವರನ್ನು ಅಚ್ಚರಿಗೀಡು ಮಾಡಿತು. ಅಂತಿಮವಾಗಿ ಅವರು ಚಪ್ಪಲಿ ಧರಿಸಿಯೇ ಪುಷ್ಪಾರ್ಚನೆ ಮಾಡಿದರು.

ನಂತರ ವೇದಿಕೆಯ ಮೇಲೆ ಭಾಷಣ ಆರಂಭಿಸಿದ ಬಾನು ಮುಷ್ತಾಕ್, ತಮ್ಮ ಕೃತ್ಯವನ್ನು ಕೇವಲ ವೃತ್ತಿ ಗೌರವಕ್ಕೆ ಸೀಮಿತಗೊಳಿಸದೆ ವೈಚಾರಿಕವಾಗಿ ಸಮರ್ಥಿಸಿಕೊಂಡರು. "ಅಂಬೇಡ್ಕರ್ ಅವರು ನಮಗೆ ಕಲಿಸಿದ್ದು ವೈಚಾರಿಕತೆಯನ್ನು ಹೊರತು ಕೇವಲ ಆಚರಣೆಗಳನ್ನಲ್ಲ. ಚಪ್ಪಲಿಯನ್ನು ಅಶುದ್ಧ ಎಂದು ಭಾವಿಸುವುದೇ ಒಂದು ರೀತಿಯ ಅಸ್ಪೃಶ್ಯತೆ. ನಾವು ಶ್ರಮಜೀವಿಗಳು, ನಮಗೆ ನಾವು ತೊಡುವ ಚಪ್ಪಲಿ ಕೂಡ ಪವಿತ್ರವೇ. ಇದನ್ನು ಧರಿಸಿಯೇ ನಾನು ಗೌರವ ಸಲ್ಲಿಸುತ್ತೇನೆ" ಎಂದು ಹೇಳುವ ಮೂಲಕ ಸಂಪ್ರದಾಯವಾದಿ ಆಚರಣೆಗಳನ್ನು ಪ್ರಶ್ನಿಸಿದರು. ಇದು ಸಭೆಯಲ್ಲಿದ್ದ ಕೆಲವರಲ್ಲಿ ಅಸಮಾಧಾನ ಮೂಡಿಸಿದರೆ, ಇನ್ನು ಕೆಲವರಲ್ಲಿ ಚಿಂತನೆಗೆ ಹಚ್ಚಿತು.

ಈ ಘಟನೆಯ ಬೆನ್ನಲ್ಲೇ ಸಾಮಾಜಿಕ ಜಾಲತಾಣಗಳಲ್ಲಿ ದಲಿತ ಪರ ಸಂಘಟನೆಗಳು ಮತ್ತು ಅಂಬೇಡ್ಕರ್ ಅನುಯಾಯಿಗಳು ಭಿನ್ನಾಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. "ವಿಚಾರವಂತಿಕೆಯ ಹೆಸರಿನಲ್ಲಿ ಶಿಷ್ಟಾಚಾರ ಮತ್ತು ಮಹಾಪುರುಷರಿಗೆ ನೀಡಬೇಕಾದ ಕನಿಷ್ಠ ಗೌರವವನ್ನು ಮರೆಯಬಾರದು" ಎಂಬ ವಾದ ಒಂದು ಕಡೆಯಾದರೆ, "ಬಾಹ್ಯ ಆಚರಣೆಗಳಿಗಿಂತ ಅಂತರಂಗದ ಭಕ್ತಿ ಮುಖ್ಯ" ಎಂಬ ವಾದ ಇನ್ನೊಂದು ಕಡೆ ಕೇಳಿಬರುತ್ತಿದೆ. ಒಟ್ಟಾರೆಯಾಗಿ ಮಂಡ್ಯದ ಈ ಘಟನೆ ಸದ್ಯಕ್ಕೆ ಶಮನವಾಗುವಂತೆ ಕಾಣುತ್ತಿಲ್ಲ ಮತ್ತು ಇದು ಸಾಂಸ್ಕೃತಿಕ ಚರ್ಚೆಗೆ ಹೊಸ ಆಯಾಮ ನೀಡಿದೆ.

# ಫ್ಲಿಪ್‌ಕಾರ್ಟ್‌ನ '1 ರೂಪಾಯಿಗೆ ಹಾಲು' ಯೋಜನೆಗೆ ಬಮೂಲ್ ಬ್ರೇಕ್



ಬೆಂಗಳೂರು: ಪ್ರಖ್ಯಾತ ಇ-ಕಾಮರ್ಸ್ ಸಂಸ್ಥೆಯಾದ ಫ್ಲಿಪ್‌ಕಾರ್ಟ್ (Flipkart) ಕೇವಲ ಒಂದು ರೂಪಾಯಿಗೆ ಒಂದು ಲೀಟರ್ ಹಾಲು ಮಾರಾಟ ಮಾಡಲು ಮುಂದಾಗಿರುವುದು ಈಗ ರಾಜ್ಯದ ಹೈನುಗಾರಿಕೆ ವಲಯದಲ್ಲಿ ಭಾರಿ ಸಂಚಲನ ಮೂಡಿಸಿದೆ. ಈ ನಡೆಯನ್ನು ತೀವ್ರವಾಗಿ ಖಂಡಿಸಿರುವ ಬೆಂಗಳೂರು ಹಾಲು ಒಕ್ಕೂಟದ (ಬಮೂಲ್) ಅಧ್ಯಕ್ಷ ಡಿ.ಕೆ. ಸುರೇಶ್ ಅವರು, ಇದು ರೈತ ಸಮುದಾಯವನ್ನು ಸಂಪೂರ್ಣವಾಗಿ ಧ್ವಂಸ ಮಾಡುವ ಕೃತ್ಯ ಎಂದು ಕಿಡಿಕಾರಿದ್ದಾರೆ. ಸದಾಶಿವನಗರದ ತಮ್ಮ ನಿವಾಸದಲ್ಲಿ ಶನಿವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಂಸ್ಥೆಯ ಈ ಅಕ್ರಮ ಸ್ಪರ್ಧೆಯ ವಿರುದ್ಧ ಕಾನೂನು ಹೋರಾಟದ ಎಚ್ಚರಿಕೆ ನೀಡಿದ್ದಾರೆ.

ಮಾರುಕಟ್ಟೆಯನ್ನು ತನ್ನ ಕಪಿಮುಷ್ಟಿಗೆ ತೆಗೆದುಕೊಳ್ಳಲು ಫ್ಲಿಪ್‌ಕಾರ್ಟ್ ಸುಮಾರು 2 ಸಾವಿರ ಕೋಟಿ ರೂಪಾಯಿಗಳ ಸಾರ್ವಜನಿಕ ಹಣವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಸುರೇಶ್ ಆರೋಪಿಸಿದ್ದಾರೆ. "ಇಂತಹ ಅಗ್ಗದ ದರದ ಮಾರಾಟದಿಂದ ರೈತರಿಗೆ ಸಿಗಬೇಕಾದ ನ್ಯಾಯಯುತ ಬೆಲೆಗೆ ಹೊಡೆತ ಬೀಳುತ್ತದೆ. ಹಾಲಿನ ಮಾರುಕಟ್ಟೆಯಲ್ಲಿ ಇಂತಹ ಅಸಹಜ ಸ್ಪರ್ಧೆ ಏರ್ಪಡಿಸುವುದು ಕಾನೂನುಬಾಹಿರ" ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

# ಆಂಧ್ರದ ಅಸಹಕಾರದ ವಿರುದ್ಧ ದೆಹಲಿಯಲ್ಲಿ ಸಂಸದರ ಮಹತ್ವದ ಸಭೆ!






**ಬಾಗಲಕೋಟೆ:** ಕರ್ನಾಟಕದ ಪಾಲಿನ ಕೃಷ್ಣಾ ಮತ್ತು ತುಂಗಭದ್ರಾ ನದಿ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಅಡ್ಡಿಪಡಿಸುತ್ತಿರುವ ಆಂಧ್ರಪ್ರದೇಶದ ನಿಲುವಿನ ವಿರುದ್ಧ ರಾಜ್ಯ ಸರ್ಕಾರ ಈಗ ಆಕ್ರಮಣಕಾರಿ ಹೋರಾಟಕ್ಕೆ ಸಜ್ಜಾಗಿದೆ. ಈ ಕುರಿತು ಬಾಗಲಕೋಟೆಯಲ್ಲಿ ಶನಿವಾರ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯದ ನೀರಾವರಿ ಹಿತಾಸಕ್ತಿಗಳನ್ನು ರಕ್ಷಿಸಲು ಮತ್ತು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲು ಬರುವ ಮಂಗಳವಾರ ದೆಹಲಿಯಲ್ಲಿ ರಾಜ್ಯದ ಸಂಸದರೊಂದಿಗೆ ಉನ್ನತ ಮಟ್ಟದ ಸಭೆ ನಡೆಸುವುದಾಗಿ ಘೋಷಿಸಿದರು.

ಕೃಷ್ಣಾ ಮೇಲ್ದಂಡೆ ಯೋಜನೆ (UKP) ಮತ್ತು ಆಂಧ್ರದ ತಗಾದೆ: ಯುಕೆಪಿ 3ನೇ ಹಂತದ ಅಡಿಯಲ್ಲಿ ಭೂಸ್ವಾಧೀನ ಪ್ರಕ್ರಿಯೆ ಮತ್ತು ಕಾಮಗಾರಿಗಳನ್ನು ಕೈಗೊಳ್ಳದಂತೆ ಆಂಧ್ರಪ್ರದೇಶ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಆಕ್ಷೇಪ ವ್ಯಕ್ತಪಡಿಸಿದೆ. ಈ ಬಗ್ಗೆ ಕಿಡಿಕಾರಿದ ಡಿಸಿಎಂ, "ನ್ಯಾಯಾಧೀಕರಣವು ಈಗಾಗಲೇ ಕರ್ನಾಟಕಕ್ಕೆ ತನ್ನ ಪಾಲಿನ ನೀರನ್ನು ಬಳಸಿಕೊಳ್ಳಲು ಅನುಮತಿ ನೀಡಿದೆ. ನಾವು 2010ರ ಆದೇಶದ ಚೌಕಟ್ಟಿನಲ್ಲೇ ಕೆಲಸ ಮಾಡುತ್ತಿದ್ದೇವೆ. ಈಗಾಗಲೇ ಈ ಯೋಜನೆಗಾಗಿ 26 ಸಾವಿರ ಕೋಟಿ ರೂ. ವೆಚ್ಚದ ಕಾಮಗಾರಿಗಳು ಪ್ರಗತಿಯಲ್ಲಿವೆ. ಆಂಧ್ರದ ಅನಗತ್ಯ ದೂರಿನ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ನಮಗೆ ಪತ್ರ ಬರೆದು ವಿವರಣೆ ಕೇಳಿರುವುದು ವಿಪರ್ಯಾಸ. ನಾವು ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ಈಗಲೇ ಹೆಚ್ಚಿಸುತ್ತಿಲ್ಲ, ಬದಲಿಗೆ ನಮ್ಮ ಪಾಲಿನ ನೀರು ಶೇಖರಣೆಗೆ ಮತ್ತು ಬಳಕೆಗೆ ಬೇಕಾದ ಪೂರಕ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದ್ದೇವೆ" ಎಂದು ಸ್ಪಷ್ಟಪಡಿಸಿದರು.

ತುಂಗಭದ್ರಾ ಜಲಾನಯನ ಪ್ರದೇಶದ ಬಿಕ್ಕಟ್ಟು: ತುಂಗಭದ್ರಾ ಅಣೆಕಟ್ಟೆಯಲ್ಲಿ ಹೂಳು ತುಂಬಿರುವ ಪರಿಣಾಮವಾಗಿ ಕರ್ನಾಟಕಕ್ಕೆ ಪ್ರತಿವರ್ಷ ಸುಮಾರು 30 ಟಿಎಂಸಿ ನೀರು ಲಭ್ಯವಾಗದೆ ಸಮುದ್ರಕ್ಕೆ ಹರಿದು ಹೋಗುತ್ತಿದೆ. ಈ ನೀರನ್ನು ಉಳಿಸಿಕೊಳ್ಳಲು ಪರ್ಯಾಯ ಮಾರ್ಗಗಳನ್ನು (ಸಮಾನಾಂತರ ಕಾಲುವೆ ಅಥವಾ ಜಲಾಶಯ) ನಿರ್ಮಿಸಲು ಆಂಧ್ರ ಸರ್ಕಾರ ಸಹಕಾರ ನೀಡುತ್ತಿಲ್ಲ. "ನಮ್ಮ ಪಾಲಿನ ನೀರು ವ್ಯರ್ಥವಾಗುತ್ತಿರುವುದನ್ನು ತಡೆಯಲು ನಾವು ಮುಂದಾದರೆ ನೆರೆಯ ರಾಜ್ಯ ಅಸಹಕಾರ ತೋರುತ್ತಿದೆ. ಈ ಎಲ್ಲಾ ವಿಚಾರಗಳನ್ನು ಕೇಂದ್ರ ಜಲಶಕ್ತಿ ಸಚಿವರ ಗಮನಕ್ಕೆ ತರಲು ನಾವು ನಿರ್ಧರಿಸಿದ್ದೇವೆ" ಎಂದು ಅವರು ತಿಳಿಸಿದರು.

ದೆಹಲಿ ನಿಯೋಗದ ಉದ್ದೇಶ: ರಾಜ್ಯದ ನೀರಾವರಿ ಸಚಿವರಾದ ಎಂ.ಬಿ. ಪಾಟೀಲ್, ಕಾನೂನು ಸಚಿವ ಹೆಚ್.ಕೆ. ಪಾಟೀಲ್ ಮತ್ತು ಸಚಿವ ಬೋಸರಾಜು ಅವರನ್ನೊಳಗೊಂಡ ಪ್ರಭಾವಿ ನಿಯೋಗವು ದೆಹಲಿಗೆ ತೆರಳಲಿದೆ. ಅಲ್ಲಿ ಕರ್ನಾಟಕದ ಎಲ್ಲಾ ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರನ್ನು ಭೇಟಿ ಮಾಡಿ, ಪಕ್ಷಾತೀತವಾಗಿ ರಾಜ್ಯದ ಹಿತಾಸಕ್ತಿಗಾಗಿ ಕೇಂದ್ರದ ಮೇಲೆ ಒತ್ತಡ ಹೇರಲು ಈ ಸಭೆ ಆಯೋಜಿಸಲಾಗಿದೆ. ರಾಜ್ಯದ ರೈತರ ಹಿತದೃಷ್ಟಿಯಿಂದ ಈ ಯೋಜನೆಗಳು ಅತ್ಯಗತ್ಯವಾಗಿದ್ದು, ಯಾವುದೇ ಕಾರಣಕ್ಕೂ ವಿಳಂಬಕ್ಕೆ ಆಸ್ಪದ ನೀಡುವುದಿಲ್ಲ ಎಂಬ ದೃಢ ನಿಲುವನ್ನು ಸರ್ಕಾರ ತಳೆದಿದೆ.